(ಅನುಬಂಧ–X)

(ಗೊಂದಲ)

(ಎ) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರ: ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–XI)

(ಗೊಂದಲ)

(ಏ) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ವಿಧಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ–XII)

(ಗೊಂದಲ)

(iv) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2010

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, "ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 16ರವರೆಗೆ

ಅಧ್ಯಕ್ಷರು: "ಖಂಡ 2ರಿಂದ 16ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 16ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಿಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ